ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು

## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 4/1/2020

# ಕಸ್ತೂರಿ ರಂಗನ್ ವರದಿ ಜಾರಿಗೆ ಬಿಡಲ್ಲ

## ರೈತರಿಗೆ ಸಮಸ್ಯೆಯಾಗುವ ವರದಿಗೆ ಅವಕಾಶವಿಲ್ಲ। ಕೇಂದ್ರ ಸರಕಾರಕ್ಕೆ ಈ ಬಗ್ಗೆ ಮನವರಿಕೆ ಮಾಡಿಕೊಡುತ್ತೇವೆ

**ಬೆಂಗಳೂರು:** ರೈತರಿಗೆ ಸಮಸ್ಯೆಯಾಗುವ ಕಸ್ತೂರಿ ರಂಗನ್ ವರದಿ ಜಾರಿಗೆ ಬಿಡುವುದಿಲ್ಲ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಸ್ಪಷ್ಟಪಡಿಸಿದ್ದಾರೆ. ಶಿವಮೊಗ್ಗದಲ್ಲಿ ನಡೆದ ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಕೃಷಿಕರಿಗೆ ತೊಂದರೆಯಾಗುವ ಕಸ್ತೂರಿ ರಂಗನ್ ವರದಿ ಜಾರಿಗೆ ಬರಲು ಬಿಡುವುದಿಲ್ಲ. ಈ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ಇದರೊಂದಿಗೆ ವರದಿ ಜಾರಿಯಿಂದ ಆಗಬಹುದಾದ ಸಮಸ್ಯೆ ಬಗ್ಗೆ ಕೇಂದ್ರ ಸರಕಾರಕ್ಕೆ ಮನವರಿಕೆ ಮಾಡಿಕೊಡುವುದಾಗಿ ಹೇಳಿದರು.



ಪ್ರಧಾನಿ ನರೇಂದ್ರ ಮೋದಿ ಅವರನ್ನು ವಿಶ್ವದ ಅಗ್ರಗಣ್ಯ ನಾಯಕ ಎಂದು ಜಗತ್ತು ಒಪ್ಪಿಕೊಂಡಿದೆ. ದೇಶವನ್ನು ಮಾದರಿ ರಾಷ್ಟ್ರವನ್ನಾಗಿ ಮಾಡಲು ಶ್ರಮವಹಿಸಿರುವ ಅಗ್ರಗಣ್ಯ ನಾಯಕ ಮೋದಿ ಅವರು ಮತ್ತೊಂದು ಬಾರಿ ಪ್ರಧಾನಿಯಾಗಿ ದೇಶವನ್ನು ಅಗ್ರಗಣ್ಯ ರಾಷ್ಟ್ರವನ್ನಾಗಿ ಮಾಡಲಿ. 370ನೇ ವಿಧಿ ರದ್ದು, ಕೃಷಿ ಸುಧಾರಣಾ ಮಸೂದೆ ಜಾರಿ, ನಾಗರಿಕ ಪೌರತ್ವ ತಿದ್ದುಪಡಿ ಕಾಯಿದೆ ಅನುಷ್ಠಾನದಂಥ ಮಹತ್ವದ ಯೋಜನೆಗಳನ್ನು ಕೇಂದ್ರ ಸರಕಾರ ಜಾರಿಗೊಳಿಸಿದೆ ಎಂದರು.

**ಜಿಪಂ ಚುನಾವಣೆಗೆ ಸಜ್ಜಾಗಿ:** ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಮಾತನಾಡಿ, ಮುಂದಿನ ನಾಲ್ಕು ತಿಂಗಳುಗಳ ಬಳಿಕ ತಾಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆ ಪಕ್ಷದ ಚಿಹ್ನೆಯಡಿ ನಡೆಯಲಿದ್ದು, ಬಿಜೆಪಿ ಶೇ.80ರಷ್ಟು ಸ್ಥಾನಗಳನ್ನು ಗೆಲ್ಲಬೇಕಿದೆ. ಜನಸೇವಕ ಸಮಾವೇಶಗಳನ್ನು ಜನವರಿ 11,12,13ರಂದು ನಡೆಸಲಾಗುವುದು. ಮೈಸೂರಿನಲ್ಲಿ ಮುಖ್ಯಮಂತ್ರಿಯಿಂದ ಸಮಾವೇಶದ ಉದ್ಘಾಟನೆ ನೆರವೇರಿಸಲಾಗುವುದು ಎಂದರು.

ಗ್ರಾಮ ಸ್ವರಾಜ್ಯ ಸಮಾವೇಶಗಳು, ಕುಟುಂಬ ಸಮ್ಮಿಲನದಂಥ ಕಾರ್ಯಕ್ರಮಗಳಿಂದ ಪಕ್ಷದ 44 ಸಾವಿರ ಕಾರ್ಯಕರ್ತರು ಇದೀಗ ಪಂಚಾಯತ್ ಸದಸ್ಯರಾಗಿದ್ದಾರೆ. 3,500 ಜನರು ಅಧ್ಯಕ್ಷರಾಗುವ ಕನಸು ನನಸಾಗಲಿದೆ. ಶೇ.60 ಪಂಚಾಯತ್‌ಗಳಲ್ಲಿ ಬಿಜೆಪಿ ಕಾರ್ಯಕರ್ತರು ಗೆಲುವು ಸಾಧಿಸಿದ್ದಾರೆ.